## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Clean Wind Power (Manvi) Pvt. Ltd., ರವರಿಗೆ IPP-TPS ಪ್ರವರ್ಗದಡಿ ಹಂಚಿಕೆಯಾಗಿರುವ 37.125 ಮೆ.ವ್ಯಾ. ಸಾಮರ್ಥ್ಯದ ಯೋಜನೆಯ ಸಾಮರ್ಥ್ಯವನ್ನು 28.875 ಮೆ.ವ್ಯಾ. ಸಾಮರ್ಥ್ಯಕ್ಕೆ ತಗ್ಗಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ : ಇಎನ್ 344 ಎನ್‌ಸಿಇ 2016, ದಿನಾಂಕ : 04.01.2017.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ: ಕೆ.ಆರ್.ಇ.ಡಿ.ಎಲ್/07/ಎಸ್‌ಜಿ/ಎಫ್-196/2017/4424, ದಿನಾಂಕ: 22.06.2017.

* * *

ಪ್ರಸ್ತಾವನೆ :-

M/s Clean Wind Power (Manvi) Pvt. Ltd., ರವರಿಗೆ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಕವಿತಾಳ್ ಗ್ರಾಮದಲ್ಲಿ 37.125 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಕೆಲವು ಷರತ್ತುಗಳಿಗೊಳಪಡಿಸಿ ಸ್ವತಂತ್ರ ಉತ್ಪಾದನೆ ಮಾದರಿಯಲ್ಲಿ (Independent Power Producer) ಸ್ಥಾಪಿಸಿ, ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಉಲ್ಲೇಖಿತ (1) ರ ಆದೇಶದ ಮೂಲಕ ಅನುಮತಿಸಲಾಗಿರುತ್ತದೆ.

M/s Clean Wind Power (Manvi) Pvt. Ltd., ರವರು ಸದರಿ ಯೋಜನೆಯ ಸಾಮರ್ಥ್ಯವನ್ನು 37.125 ಮೆ.ವ್ಯಾ. ಯಿಂದ 28.875 ಮೆ.ವ್ಯಾಗಳಿಗೆ ತಗ್ಗಿಸುವಂತೆ ಕೋರಿಕೆ ಸಲ್ಲಿಸಿ, ಅದರಂತೆ ಫೆಸಿಲಿಟೇಷನ್ ಶುಲ್ಕವನ್ನು ಪಾವತಿಸಿರುವುದಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಉಲ್ಲೇಖಿತ (2) ರ. ಪತ್ರದಲ್ಲಿ, ಉಲ್ಲೇಖಿತ (1) ರ ಆದೇಶದಲ್ಲಿ ಅನುಮತಿಸಿರುವ ಯೋಜನಾ ಸಾಮರ್ಥ್ಯವನ್ನು 37.125 ಮೆ.ವ್ಯಾ. ನಿಂದ 28.875 ಮೆ.ವ್ಯಾಗಳಿಗೆ ತಗ್ಗಿಸಿ ಮರು ಆದೇಶವನ್ನು ಹೊರಡಿಸುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 283 ಎನ್‌ಸಿಇ 2017**
**ಬೆಂಗಳೂರು, ದಿನಾಂಕ: 11.07.2017.**

M/s Clean Wind Power (Manvi) Pvt. Ltd., ರವರಿಗೆ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಕವಿತಾಳ್ ಗ್ರಾಮದಲ್ಲಿ ಸ್ವತಂತ್ರ ಉತ್ಪಾದನೆ ಮಾದರಿಯಲ್ಲಿ (Independent Power Producer) ಸ್ಥಾಪಿಸಿ, ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿಸಿರುವ ಯೋಜನಾ ಸಾಮರ್ಥ್ಯವನ್ನು 37.125 ಮೆ.ವ್ಯಾ. ಗಳಿಂದ 28.875 ಮೆ.ವ್ಯಾಗಳಿಗೆ ತಗ್ಗಿಸಿ ಆದೇಶಿಸಲಾಗಿದೆ.

...2)

ಉಳಿದಂತೆ, ಇಎನ್ 344 ಎನ್‌ಸಿಇ 2016, ದಿನಾಂಕ: 04.01.2017 ರ ಆದೇಶದಲ್ಲಿನ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಈ ಆದೇಶವನ್ನು ರದ್ದು ಮಾಡುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದಶಿ, ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ : 5398, ಬೆಂಗಳೂರು 560001.
2. ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ : 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ : 5329, ಬೆಂಗಳೂರು-560001.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಡಿ ಕಟ್ಟಡ, ಬೆಂಗಳೂರು.
6. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
10. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಕಲಬುರಗಿ.
11. ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ, ರಾಯಚೂರು.
12. ಉಪ ಅರಣ್ಯ ಸಂರಕ್ಷಣಾಧಿಕಾರಿ, ರಾಯಚೂರು. ಜಿಲ್ಲೆ, ರಾಯಚೂರು.
13. M/s Clean Wind Power (Manvi) Pvt. Ltd., No.212, Ground Floor, Okhla Industrial Estate Phase III, New Delhi-110020.
14. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
15. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
16. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
17. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s Clean Wind Power (Manvi) Pvt. Ltd., ರವರಿಗೆ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಕವಿತಾಳ್ ಗ್ರಾಮದಲ್ಲಿ 37.125 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣಾ ನೀಡುವ ಬಗ್ಗೆ.

**ಓದಲಾಗಿದೆ:**
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 496.
2. ದಿನಾಂಕ: 19.12.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಏಕ ಕಡತ ಪದ್ಧತಿಯಡಿಯಲ್ಲಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Clean Wind Power (Manvi) Pvt. Ltd., ರವರಿಗೆ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಕವಿತಾಳ್ ಗ್ರಾಮದಲ್ಲಿ 37.125 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ವತಂತ್ರ ಉತ್ಪಾದನೆ ಮಾದರಿಯಲ್ಲಿ (Independent Power Producer) ಸ್ಥಾಪಿಸಿ, ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿರುತ್ತಾರೆ. ಸದರಿ ಯೋಜನೆಗೆ ಸಂಬಂಧಿಸಿದಂತೆ ಸ್ಥಳದ ಮಾಹಿತಿ ಮತ್ತು ಈ ಕೆಳಕಂಡ ವಿವರಗಳೊಂದಿಗೆ M/s Clean Wind Power (Manvi) Pvt. Ltd., ರವರಿಗೆ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಕವಿತಾಳ್ ಗ್ರಾಮದಲ್ಲಿ 37.125 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ವತಂತ್ರ ಉತ್ಪಾದನೆ ಮಾದರಿಯಲ್ಲಿ (Independent Power Producer) ಸ್ಥಾಪಿಸಲು ಮತ್ತು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ನಿರಾಕ್ಷೇಪಣಾ ನೀಡಬಹುದೆಂದು ಕ್ರೆಡಲ್ ಸಂಸ್ಥೆಯು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿವರ | : | ಜಿಲ್ಲೆ : ರಾಯಚೂರು<br>ತಾಲ್ಲೂಕು :ಮಾನ್ವಿ<br>ಗ್ರಾಮ : ಕವಿತಾಳ್ |
| ಯೋಜನಾ ಜಮೀನಿನ ವಿವರ | : | ಖಾಸಗಿ ಜಮೀನು |
| ಯೋಜನಾ ಪ್ರದೇಶದ ಸಮೀಪವಿರುವ ಸಬ್ ಸ್ಟೇಷನ್ | : | ಕವಿತಾಳ್ |
| ಯೋಜನಾ ಪ್ರದೇಶದ Co-Ordinate ವಿವರ | : | ಅಕ್ಷಾಂಶ: 16°9.987'N<br>ರೇಖಾಂಶ: 76°45.783'E |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಮೂರನೇ ವ್ಯಕ್ತಿಗೆ ಮಾರಾಟ ಮಾಡಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಅರ್ಜಿ ನೋಂದಣಿ ಶುಲ್ಕ ಪಾವತಿಸಿದೆ |

ಮೇಲೆ ಓದಲಾದ ಕ್ರಮ ಸಂಖ್ಯೆ (2) ರನ್ವಯ ದಿನಾಂಕ: 19.12.2016 ರಂದು ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಸಮಿತಿಯು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, M/s Clean Wind Power (Manvi) Pvt. Ltd., ರವರಿಗೆ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಕವಿತಾಳ್ ಗ್ರಾಮದಲ್ಲಿ 37.125 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ವತಂತ್ರ

....2)

ಉತ್ಪಾದನೆ ಮಾದರಿಯಲ್ಲಿ (Independent Power Producer) ಸ್ಥಾಪಿಸಿ, ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣೆಯನ್ನು ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ

**ಸರ್ಕಾರದ ಆದೇಶ ಸಂಖ್ಯೆ : ಇಎನ್ 344 ಎನ್‌ಸಿಇ 2016**
**ಬೆಂಗಳೂರು, ದಿನಾಂಕ: 04.01.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, M/s Clean Wind Power (Manvi) Pvt. Ltd., ರವರಿಗೆ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಕವಿತಾಳ್ ಗ್ರಾಮದಲ್ಲಿ 37.125 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ವತಂತ್ರ ಉತ್ಪಾದನೆ ಮಾದರಿಯಲ್ಲಿ (Independent Power Producer) ಸ್ಥಾಪಿಸಲು ಮತ್ತು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು **ನಿರಾಕ್ಷೇಪಣೆಯನ್ನು** ನೀಡಿ ಆದೇಶಿಸಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ / ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು.

2. M/s Clean Wind Power (Manvi) Pvt. Ltd., ರವರು ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

3. ಪ್ರಸ್ತಾಪಿತ ಸ್ವತಂತ್ರ ಉತ್ಪಾದನೆ ಮಾದರಿಯ (Independant Power Producer) ಸೋಲಾರ್ ಘಟಕದಿಂದ ಉತ್ಪತ್ತಿಯಾಗುವ ವಿದ್ಯುತ್‌ನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಹಾಗೂ ಈ ಸಂಬಂಧ ಅಗತ್ಯವಿರುವ ವಿದ್ಯುತ್ ಜಾಲಕ್ಕೆ ಜೋಡಣೆ ಮಾಡಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಮತ್ತು ಬ್ಯಾಂಕಿಂಗ್ ಒಪ್ಪಂದ ಮಾಡಿಕೊಳ್ಳಲು ಅನುಮತಿಸಿದೆ.

4. M/s Clean Wind Power (Manvi) Pvt. Ltd., ರವರು ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು.

5. M/s Clean Wind Power (Manvi) Pvt. Ltd., ರವರು ಸ್ಥಾಪಿಸುತ್ತಿರುವ ಸದರಿ ಸೌರ ವಿದ್ಯುತ್ ಘಟಕಕ್ಕೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.

...3)

6. ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಆದೇಶ ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ವಿಶ್ವನಾಥ ಪಿ. ಹಿರೇಮಠ),**
ಸರ್ಕಾರದ ಉಪ ಕಾರ್ಯದರ್ಶಿ,
ಇಂಧನ ಇಲಾಖೆ.
4/1/17

__ಇವರಿಗೆ:__
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

__ಪ್ರತಿ:__

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದಶಿ, ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪಟ್ಟಿಗೆ ಸಂಖ್ಯೆ : 5398, ಬೆಂಗಳೂರು 560001.
2. ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪಟ್ಟಿಗೆ ಸಂಖ್ಯೆ : 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ : 5329, ಬೆಂಗಳೂರು-560001.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಡಿ ಕಟ್ಟಡ, ಬೆಂಗಳೂರು.
6. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
8. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು-1.
10. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಕಲಬುರಗಿ.
11. ಜಿಲ್ಲಾಧಿಕಾರಿ, ರಾಯಚೂರು ಜಿಲ್ಲೆ, ರಾಯಚೂರು.
12. ಉಪ ಅರಣ್ಯ ಸಂರಕ್ಷಣಾಧಿಕಾರಿ, ರಾಯಚೂರು. ಜಿಲ್ಲೆ, ರಾಯಚೂರು.
13. M/s Clean Wind Power (Manvi) Pvt. Ltd., No.212, Ground Floor, Okhla Industrial Estate Phase III, New Delhi-110020.
14. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
15. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
16. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
17. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.